# Akashvani : Bangalore
# Regional Bulletin In Kannada
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

19.06.2026 18.40 hrs

<><*<><>*><>

## ಮುಖ್ಯಾಂಶಗಳು

- ಕೆಂಪೇಗೌಡ ಥೀಮ್ ಪಾರ್ಕ್ : ಜೂನ್ ೨೭ ರಂದು ಮುಖ್ಯಮಂತ್ರಿ
- ಡಿ.ಕೆ. ಶಿವಕುಮಾರ್ ಅವರಿಂದ ಲೋಕಾರ್ಪಣೆ
- ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ ಜಾಥಾಕ್ಕೆ ಚಾಲನೆ
- ರಾಜ್ಯದ ಹಲವು ಜಿಲ್ಲೆಗಳಲ್ಲಿ ಯೋಗ ದಿನಾಚರಣೆಗೆ ಸಕಲ ಸಿದ್ಧತೆ
- ರಾಜ್ಯದ ಹಲವು ಜಿಲ್ಲಾ ನ್ಯಾಯಾಲಯಗಳಿಗೆ ಬಾಂಬ್ ಬೆದರಿಕೆ ಸಂದೇಶ: ಹೆಚ್ಚಿದ ಆತಂಕ

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿಯ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ನಿರ್ಮಾಣಗೊಂಡಿರುವ ಕೆಂಪೇಗೌಡ ಥೀಮ್ ಪಾರ್ಕ್ ಅನ್ನು ನಾಡಪ್ರಭು ಕೆಂಪೇಗೌಡರ ಜಯಂತಿ ದಿನವಾದ ಜೂನ್ ೨೭ ರಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಲೋಕಾರ್ಪಣೆ ಮಾಡಲಿದ್ದಾರೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರಾದ ಕೆ.ಹೆಚ್ ಮುನಿಯಪ್ಪ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದಲ್ಲಿ ನಡೆದ ಕೆಂಪೇಗೌಡ ಜಯಂತಿ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ದೇವನಹಳ್ಳಿಯ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ೧೦೮ ಅಡಿ ಎತ್ತರದ ಬೆಂಗಳೂರು ನಿರ್ಮಾತೃ ಕೆಂಪೇಗೌಡರ ಭವ್ಯ ಕಂಚಿನ ಪ್ರತಿಮೆ ಬಳಿ ಅಂದಾಜು ೨೦ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಕೆಂಪೇಗೌಡ ತೀಮ್ ಪಾರ್ಕ್ ನಿರ್ಮಿಸಲಾಗಿದ್ದು ಜೂನ್ ೨೭ ರಂದು ಮುಖ್ಯಮಂತ್ರಿಗಳು ಬೆಳಿಗ್ಗೆ ೮.೩೦ ಕ್ಕೆ ಲೋಕಾರ್ಪಣೆ ಮಾಡಲಿದ್ದಾರೆ. ಕೆಂಪೇಗೌಡರ ವಂಶಸ್ಥರು ನೆಲೆಸಿದ್ದಂತ ದೇವನಹಳ್ಳಿ ತಾಲ್ಲೂಕಿನ ಆವತಿ ಗ್ರಾಮದಿಂದ ಪ್ರತಿ ವರ್ಷದಂತೆ ಈ ವರ್ಷವೂ ಜ್ಯೋತಿ ಹೊರಡಲಿದೆ ಎಂದು ಹೇಳಿದರು. ಸಭೆಯಲ್ಲಿ ಜಿಲ್ಲಾಧಿಕಾರಿ ಡಾ. ಕೆ.ಎನ್ ಅನುರಾಧ, ಸಿಇಒ ಡಾ. ವಾಸಂತಿ ಅಮರ್, ಉಪಸ್ಥಿತರಿದ್ದರು.

<><*<><>*><>

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಯಶಸ್ವಿಗೊಳಿಸಬೇಕು ಎಸ್.ಐ.ಆರ್ ರಾಜ್ಯಾದ್ಯಂತ ದೇಶದ ವಿವಿಧ ರಾಜ್ಯಗಳಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ ಕಾರ್ಯ ನಡೆಯುತ್ತಿದ್ದು ಈಗಾಗಲೇ ಮ್ಯಾಪಿಂಗ್ ಕಾರ್ಯವನ್ನು ಬಿಎಲ್ಒ ನಿರಂತರವಾಗಿ ಮಾಡುತ್ತಿದ್ದಾರೆ ಎಂದು ಸಹಾಯಕ ಆಯುಕ್ತ ಡಾ. ಹಂಪಣ್ಣ ಸಜ್ಜನ್ ಹೇಳಿದ್ದಾರೆ. ರಾಯಚೂರು ಜಿಲ್ಲಾಡಳಿತ ಆವರಣದಲ್ಲಿ ಇಂದು ಜರುಗಿದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ ಜಾಥಾಕ್ಕೆ ಹಸಿರು ನಿಶಾನೆ ತೋರಿ ಮಾತನಾಡಿದ ಅವರು, ಈಗಾಗಲೇ ಮತದಾರರ ಮ್ಯಾಪಿಂಗ್ ಕಾರ್ಯ ಪ್ರಗತಿಯಲ್ಲಿದೆ ಮತಗಟ್ಟೆ ಅಧಿಕಾರಿಗಳು, ಮೇಲ್ವಿಚಾರಕರಿಗೆ ತರಬೇತಿ ಸಹ ನೀಡಲಾಗಿದೆ ಎಂದರು.

೨೦೦೨ ಮತದಾರರ ಪಟ್ಟಿಯನ್ನು ಮಾನದಂಡವಾಗಿಟ್ಟುಕೊಡು ೨೦೨೫ ಮತದಾರರ ಪಟ್ಟಿಯೊಂದಿಗೆ ಹೋಲಿಕೆ ಮಾಡಿ ನೈಜ ಮತದಾರರನ್ನು ಗುರುತಿಸಲಾಗುತ್ತದೆ ಎಂದು ತಿಳಿಸಿದರು.

<><*<><>*><>

ಇದೇ ಜೂನ್ ೨೧ರ ನಡೆಯಲಿರುವ ಅಂತಾರಾಷ್ಟ್ರೀಯ ಯೋಗ ದಿನದ ಅಂಗವಾಗಿ ರಾಜ್ಯದ ಹಲವು ಜಿಲ್ಲೆಗಳಲ್ಲಿ ಯೋಗ ದಿನಾಚರಣೆಗೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ಜಾಗೃತಿ ಜಾಥಾ, ಯೋಗದ ಕುರಿತು ಜಾಗೃತಿ ಕಾರ್ಯಕ್ರಮ ಕೈಗೊಳ್ಳಲಾಗುತ್ತಿದೆ. ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಇಂದು ಬಳ್ಳಾರಿ ನಗರದಲ್ಲಿ ಸಾರ್ವಜನಿಕರಲ್ಲಿ ಆರೋಗ್ಯ ಮತ್ತು ಯೋಗದ ಮಹತ್ವದ ಕುರಿತು ಜಾಗೃತಿ ಮೂಡಿಸುವ ಜಾಥಾವನ್ನು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ಹಾಗೂ ವಿವಿಧ ಯೋಗ ಸಂಸ್ಥೆಗಳ ಜಂಟಿ ಆಶ್ರಯದಲ್ಲಿ ನಡೆಯಿತು. ಆಯುಷ್ ಅಧಿಕಾರಿ ಡಾ.ಟಿ. ಫಣೀಂದರ್ ಜಾಥಾಗೆ ಚಾಲನೆ ನೀಡಿ ಮಾತನಾಡಿದ ಅವರು, ಯೋಗದಿಂದ ದೇಹಕ್ಕೆ ಮತ್ತು ಮನಸ್ಸಿಗೆ ಅನೇಕ ಆರೋಗ್ಯಕರ ಪ್ರಯೋಜನಗಳಿವೆ ಎಂದರು. ಜಾಥಾದಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳು, ಯೋಗ ಪಟುಗಳು, ಸಾರ್ವಜನಿಕರು ಹಾಗೂ ಹಿರಿಯ ನಾಗರಿಕರು ಪಾಲ್ಗೊಂಡಿದ್ದರು. ‘ಆರೋಗ್ಯವೇ ಭಾಗ್ಯ’, ‘ದಿನವೂ ಮಾಡಿ ಯೋಗ, ದೂರವಿಡಿ ರೋಗ’ ಎಂಬ ಘೋಷಣೆಗಳುಳ್ಳ ಫಲಕಗಳನ್ನು ಹಿಡಿದು ಸಾರ್ವಜನಿಕರ ಗಮನ ಸೆಳೆಯಲಾಯಿತು. ಇದೇ ೨೧ ರಂದು ನಡೆಯಲಿರುವ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ನಿಮಿತ್ತ, ಯೋಗದ ಜಾಗೃತಿಗಾಗಿ ಇಂದು ಬೆಳಗಾವಿಯಲ್ಲಿ ಆಯೋಜಿಸಲಾದ ಬೃಹತ್ ಯೋಗ ಜಾಥಾಗೆ ಬೆಳಗಾವಿ ಜಿಲ್ಲಾ ಪಂಚಾಯತ ಯೋಜನಾ ಇಲಾಖೆ ವ್ಯವಸ್ಥಾಪಕ ನಿರ್ದೇಶಕ ರವಿ ಬಂಗಾರೆಪ್ಪ ಹಾಗೂ ಆಯುಷ್ಯ ಇಲಾಖೆಯ ಅಧಿಕಾರಿ ಶ್ರೀಕಾಂತ್ ಸುಣದೋಳಿ ಹಸಿರು ನಿಶಾನೆ ತೋರಿಸಿ ಚಾಲನೆ ನೀಡಿದರು. ಆಯುಷ್ಯ ಇಲಾಖೆ, ಆರೋಗ್ಯ ಇಲಾಖೆ, ಜಿಲ್ಲಾ ಪಂಚಾಯತ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ ವರ್ಗ, ಶಾಲಾ ಕಾಲೇಜು ವಿದ್ಯಾರ್ಥಿಗಳು, ವೈದ್ಯಕೀಯ ಕಾಲೇಜಿನ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು. ಆಯುಷ್ಯ ಅಧಿಕಾರಿ, ಶ್ರೀಕಾಂತ್ ಸುಣದೋಳಿ, ೨೧ ರಂದು ಸುವರ್ಣ ವಿಧಾನ ಸೌಧದ ಎದುರು ನಡೆಯಲಿರುವ ಯೋಗಾ ದಿನಾಚರಣೆಗೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ಯೋಗದ ಜಾಗೃತಿಗೆ ಆಯೋಜಿಸಲಾದ ಯೋಗ ನಡಿಗೆಯಲ್ಲಿ ವಿದ್ಯಾರ್ಥಿಗಳು, ಯುವಕ ಯುವತಿಯರು ಸಕ್ರಿಯವಾಗಿ ಪಾಲ್ಗೊಂಡಿರುವುದು ಸಂತಸ ತಂದಿದೆ ಎಂದು ತಿಳಿಸಿದರು.

<><*<><>*><>

೧೨ನೇ ಅಂತಾರಾಷ್ಟ್ರೀಯ ಯೋಗ ದಿನ ಹಿನ್ನೆಲೆ ಇದೇ ೨೧ ರಂದು ಬೆಂಗಳೂರು ದೂರದರ್ಶನ ಕೇಂದ್ರ ಯೋಗ ದಿನಾಚರಣೆ ಆಯೋಜಿಸಿದೆ. ಅಂದು ಬೆಳಗ್ಗೆ ೭ ಗಂಟೆಗೆ ದೂರದರ್ಶನ ಕೇಂದ್ರದಲ್ಲಿ ಎಂಎಸ್‌ಎಂಇ ಹಾಗೂ ಕಾರ್ಮಿಕ ಮತ್ತು ಉದ್ಯೋಗ ಖಾತೆಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಯೋಗ ದಿನಾಚರಣೆಗೆ ಚಾಲನೆ ನೀಡಲಿದ್ದಾರೆ. ಅಂತಾರಾಷ್ಟ್ರೀಯ ಯೋಗ ದಿನ ಹಿನ್ನೆಲೆಯಲ್ಲಿ ಬೆಂಗಳೂರು ಆಕಾಶವಾಣಿ ಕೇಂದ್ರದಲ್ಲಿ ಯೋಗ ದಿನಾಚರಣೆ ಆಯೋಜಿಸಲಾಗಿತ್ತು, ಕಾರ್ಯಕ್ರಮದಲ್ಲಿ ಯೋಗ ಅಭ್ಯಾಸ ಮಾಡಲಾಯಿತು. ಈ ವರ್ಷದ ಅಂತಾರಾಷ್ಟ್ರೀಯ ಯೋಗದಿನದ ಘೋಷವಾಕ್ಯವಾದ ’ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ’ ಆಚರಣೆ ಮಾಡುವುದರಿಂದ ದೈಹಿಕ ಆರೋಗ್ಯ, ಮಾನಸಿಕ ಆರೋಗ್ಯ, ಸಾಮಾಜಿಕ ಆರೋಗ್ಯ ಸೇರಿದಂತೆ ಸಂಪೂರ್ಣ ಆರೋಗ್ಯ ಸಿಗುತ್ತದೆ ಎಂದು ಯೋಗಗುರು ಮತ್ತು ಪ್ರಾಧ್ಯಾಪಕ ಡಾ. ಎಂ.ಎಸ್. ಶಿವಪ್ರಕಾಶ ಯೋಗದ ಮಹತ್ವದ ಕುರಿತು ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

<><*<><>*><>

ಚಿತ್ರದುರ್ಗ ನಗರದ ಜಿಲ್ಲಾಧಿಕಾರಿ ಕಚೇರಿ ಸಮೀಪದ ಜಿಲ್ಲಾ ನ್ಯಾಯಾಲಯಕ್ಕೆ ಬಾಂಬ್ ಬೆದರಿಕೆ ಮೇಲ್ ಬಂದ ಹಿನ್ನೆಲೆಯಲ್ಲಿ ಬುಧವಾರ ಬೆಳಿಗ್ಗೆಯಿಂದ ಆತಂಕದ ವಾತಾವರಣ ನಿರ್ಮಾಣವಾಗಿದೆ. ಬೆಳಿಗ್ಗೆ ಕೋರ್ಟ್ ಆವರಣದಲ್ಲಿ ಬಾಂಬ್ ಸ್ಫೋಟಿಸುವ ಕುರಿತು ಇ-ಮೇಲ್ ಮೂಲಕ ಬೆದರಿಕೆ ಬಂದಿತ್ತು. ಮಾಹಿತಿ ತಿಳಿಯುತ್ತಿದ್ದಂತೆ ಬಾಂಬ್ ನಿಷ್ಕ್ರಿಯ ದಳ ಮತ್ತು ಶ್ವಾನದಳದ ಸಿಬ್ಬಂದಿ ಕೋರ್ಟ್‌ಗೆ ದೌಡಾಯಿಸಿದ್ದಾರೆ. ಕೋರ್ಟ್ ಆವರಣ, ಒಳ ಭಾಗದ ಎಲ್ಲಾ ಕೊಠಡಿಗಳು, ನ್ಯಾಯಾಧೀಶರ ಚೇಂಬರ್, ವಕೀಲರ ಸಂಘ, ದಾಖಲೆ ಕೊಠಡಿ ಸೇರಿದಂತೆ ಮೂಲೆ-ಮೂಲೆಗಳಲ್ಲಿ ತೀವ್ರ ತಪಾಸಣೆ ನಡೆಸಲಾಗುತ್ತಿದೆ. ಶ್ವಾನದಳ ಸ್ಫೋಟಕ ಪತ್ತೆಗೆ ಶೋಧ ನಡೆಸಿದೆ. ಕೋಲಾರ ನಗರದ ಜಿಲ್ಲಾ ನ್ಯಾಯಾಲಯಕ್ಕೆ ಹುಸಿ ಬಾಂಬ್ ಬೆದರಿಕೆ ಸಂದೇಶ ಬಂದಿದ್ದು, ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕೋಲಾರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ಮೇಲ್‌ನಿಂದ ಸಂದೇಶ ಬಂದಿದ್ದು, ಕೊನೆಯಲ್ಲಿ ಪಾಪೂಲರ್ ಫ್ರಂಟ್ ಇಂಡಿಯಾ, ಜೈ ಕನಿಮೊಳಿ ಎಂದು ಬರೆಯಲಾಗಿದೆ. ಘಟನಾ ಸ್ಥಳಕ್ಕೆ ವೃತ್ತ ನಿರೀಕ್ಷಕ ಲೋಕೇಶ್ ನೇತೃತ್ವದಲ್ಲಿ ಬಾಂಬ್ ನಿಷ್ಕ್ರಿಯ ದಳ, ಶ್ವಾನದಳ ಹಾಗೂ ಪೊಲೀಸ್ ಅಧಿಕಾರಿಗಳು ಆಗಮಿಸಿದ್ದು, ನ್ಯಾಯಾಲಯದ ಆವರಣದಲ್ಲಿ ತಪಾಸಣೆ ನಡೆಸಿದ್ದಾರೆ. ಜಿಲ್ಲಾ ನ್ಯಾಯಾಲಯದ ಪ್ರತಿಯೊಂದು ವಿಭಾಗದಲ್ಲೂ ಪರಿಶೀಲನೆ ನಡೆಯುತ್ತಿದ್ದು, ಯಾವುದೇ ಅನುಮಾನಾಸ್ಪದ ವಸ್ತು ಪತ್ತೆಯಾಗಿದೆಯೇ ಎಂಬ ಬಗ್ಗೆ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ. ಯಾವುದೇ ರೀತಿ ಸ್ಫೋಟಕ ಪತ್ತೆಯಾಗಲಿಲ್ಲ, ಇದರಿಂದಾಗಿ ವಕೀಲರು, ಕಕ್ಷಿದಾರರು, ನ್ಯಾಯಾಧೀಶರು ನಿರಾಳರಾದರು.

<><*<><>*><>

ತುಮಕೂರು ಜಿಲ್ಲೆಯಲ್ಲಿ ವಿಶೇಷ ಕೊರಿಯನ್ ಕೈಗಾರಿಕಾ ಪ್ರದೇಶ ಸ್ಥಾಪನೆಗೆ ಸಂಬಂಧಿಸಿದ ಸಾಧ್ಯತೆಗಳನ್ನು ಪರಿಶೀಲಿಸುವ ಉದ್ದೇಶದಿಂದ ಕೊರಿಯಾ ಕನ್ಸೋರ್ಟಿಯಂನ ಪ್ರತಿನಿಧಿಗಳನ್ನು ಒಳಗೊಂಡ ನಿಯೋಗವು ಇಂದು ತುಮಕೂರಿಗೆ ಭೇಟಿ ನೀಡಿತು. ಈ ನಿಯೋಗದಲ್ಲಿ ಭಾರತದಲ್ಲಿನ ಕೊರಿಯಾ ಗಣರಾಜ್ಯದ ಕಾನ್ಸುಲೇಟ್ ಪಾಲುದಾರರು ಹಾಗೂ ಅಂತರರಾಷ್ಟ್ರೀಯ ಹೂಡಿಕೆಗಳನ್ನು ಆಕರ್ಷಿಸುವ ಕಾರ್ಯದಲ್ಲಿ ತೊಡಗಿಸಿಕೊಂಡಿರುವ ಕೊರಿಯಾ ಹೂಡಿಕೆದಾರರು ಭಾಗವಹಿಸಿದ್ದರು. ನಿಯೋಗದೊಂದಿಗೆ ಜಿಲ್ಲಾಧಿಕಾರಿಗಳು ತುಮಕೂರು ಅಮಾನಿಕೆರೆ ಹಾಗೂ ಜಿಲ್ಲಾಧಿಕಾರಿಗಳ ಕಚೇರಿಗೆ ಭೇಟಿ ನೀಡಿ, ಜಿಲ್ಲೆಯ ಕೈಗಾರಿಕಾ ಪರಿಸರ, ಮೂಲಸೌಕರ್ಯ, ಹೂಡಿಕೆ ಅವಕಾಶಗಳು ಹಾಗೂ ಸರ್ಕಾರದ ನೀತಿ ಬೆಂಬಲ ವ್ಯವಸ್ಥೆಗಳ ಕುರಿತು ವಿವರವಾದ ಮಾಹಿತಿ ನೀಡಿದರು. ಜೊತೆಗೆ, ತುಮಕೂರು ಜಿಲ್ಲೆಯ ಅಭಿವೃದ್ಧಿ ಮಾದರಿ, ಕ್ರೀಡಾ ಚಟುವಟಿಕೆಗಳು ಹಾಗೂ ಹೂಡಿಕೆದಾರರಿಗೆ ಲಭ್ಯವಿರುವ ಅನುಕೂಲಕರ ವಾತಾವರಣದ ಕುರಿತು ವಿವರಿಸಿದರು.

<><*<><>*><>

ಇತ್ತೀಚೆಗೆ ಮೈಸೂರಿನ ದಟ್ಟಗಳ್ಳಿಯ ಬಳಿ ರೆಸ್ಟೋರೆಂಟ್‌ನಲ್ಲಿ ನಡೆದ ಅಗ್ನಿ ದುರಂತವನ್ನು ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸಿದ್ದು, ಜಿಲ್ಲೆಯಲ್ಲಿ ಎರಡು ಅಥವಾ ಮೂರನೇ ಅಂತಸ್ತಿನಲ್ಲಿ ತಾತ್ಕಾಲಿಕವಾಗಿ ಕಟ್ಟಡವನ್ನು ನಿರ್ಮಿಸಿಕೊಂಡು ಅಗ್ನಿ ಸುರಕ್ಷತೆ ಕ್ರಮ ಕೈಗೊಳ್ಳದೇ ಬಾರ್ ಅಂಡ್ ರೆಸ್ಟೋರೆಂಟ್ ನಡೆಸುತ್ತಿರುವವರ ವಿರುದ್ಧ ಕ್ರಮಕೈಗೊಂಡು ಒಂದು ವಾರದೊಳಗೆ ವರದಿ ನೀಡುವಂತೆ ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ. ಜಿ ಅವರು ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>